# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಎಚ್. ರಸ್ತೆ, ತುಮಕೂರು - 572 103

ಸಂಖ್ಯೆ: ತುವಿ : ಶೈವಿ : 2017-18 : 2108 ದಿನಾಂಕ: 01.09.2017

ಗೆ,

1) ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರು/ಸಂಯೋಜನಾಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2) ಎಲ್ಲಾ ಘಟಕ ಮತ್ತು ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳು

ಮಾನ್ಯರೆ,

ವಿಷಯ : ರಾಜ್ಯದಲ್ಲಿ ಬರಪರಿಸ್ಥಿತಿಯ ಸಂದರ್ಭದಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಮಕ್ಕಳ ಶಿಕ್ಷಣ ಶುಲ್ಕ ಮತ್ತು ವಸತಿ ವೆಚ್ಚ ಮರುಪಾವತಿ ಮಾಡುವ ಕುರಿತು.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಇಡಿ 66 ವಿವಿಧ:2016 (ಭಾಗ-1) ದಿನಾಂಕ 24.07.2017

* * * *

ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ, ರಾಜ್ಯದಲ್ಲಿ ಬರಪರಿಸ್ಥಿತಿಯ ಸಂದರ್ಭದಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಮಕ್ಕಳ ಶಿಕ್ಷಣ ಶುಲ್ಕ ಮತ್ತು ವಸತಿ ವೆಚ್ಚ ಮರುಪಾವತಿ ಮಾಡುವ ಕುರಿತು ಆದೇಶವನ್ನು ಹೊರಡಿಸಿರುತ್ತದೆ. ಸದರಿ ಪತ್ರದ ಪ್ರತಿಯನ್ನು ವಿಶ್ವವಿದ್ಯಾನಿಲಯದ ಅಂತರ್ಜಾಲ www.tumkuruniversity.ac.in ನಲ್ಲಿ ಪ್ರಕಟಿಸಲಾಗಿದೆ.

ಮೇಲ್ಕಂಡ ಸರ್ಕಾರದ ಆದೇಶದ ಪ್ರತಿಯನ್ನು ಇದರೊಂದಿಗೆ ಅಡಕಗೊಳಿಸಲಾಗಿದ್ದು ಸರ್ಕಾರದ ಮಾರ್ಗಸೂಚಿಯಂತೆ ಕ್ರಮ ಕೈಗೊಳ್ಳುವಂತೆ ಈ ಮೂಲಕ ತಿಳಿಸಲಾಗಿದೆ.

ತಮ್ಮ ವಿಶ್ವಾಸಿ,

ಕುಲಸಚಿವರು

ಪ್ರತಿ:

1) ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ಅಗತ್ಯ ಕ್ರಮಕ್ಕಾಗಿ
2) ಕಚೇರಿ

e:\vd\kannada letters 2015.docx

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿ ಬರಪರಿಸ್ಥಿತಿಯ ಸಂದರ್ಭದಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಮಕ್ಕಳ ಶಿಕ್ಷಣ ಶುಲ್ಕ ಮತ್ತು ವಸತಿ ವೆಚ್ಚ ಮರುಪಾವತಿ ಮಾಡುವ ಕುರಿತು.

ಓದಲಾಗಿದೆ:
1. ಸರ್ಕಾರದ ಅದೇಶ ಸಂಖ್ಯೆ:ಇಡಿ 31 ವಿವಿಧ 2015 ಬೆಂಗಳೂರು ದಿನಾಂಕ:13.11.2015.
2. ಸೇರ್ಪಡೆ ಆದೇಶ ಸಂಖ್ಯೆ: ಇಡಿ 31 ವಿವಿಧ 2015, ದಿನಾಂಕ: 05-04-2016
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ದಿನಾಂಕ:19.11.2016 ರ ಸಭಾ ನಡವಳಿ.

* * * * *

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ರಾಜ್ಯದಲ್ಲಿ ಬರಪರಿಸ್ಥಿತಿಯ ಸಂದರ್ಭದಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಮಕ್ಕಳ ಶಿಕ್ಷಣಕ್ಕೆ ತೊಡಕಾಗಬಾರದೆನ್ನುವ ಉದ್ದೇಶದಿಂದ ಅಂಥಹ ಕುಟುಂಬಗಳ ಮಕ್ಕಳು ತಮ್ಮ ಸ್ನಾತಕೋತ್ತರ ಪದವಿಯವರೆಗೆ ಶಿಕ್ಷಣವನ್ನು ಮುಂದುವರೆಸಲು ಅನುವಾಗುವಂತೆ ಅವರಿಗೆ ಉಚಿತ ಶಿಕ್ಷಣ, ಹಾಸ್ಟೆಲ್ ಸೌಲಭ್ಯ ಅಥವಾ ತತ್ಸಮಾನ ಶಿಕ್ಷಣ ಶುಲ್ಕ ಮತ್ತು ವಸತಿ ವೆಚ್ಚವನ್ನು ಮರುಪಾವತಿ ಮಾಡಲು ತೀರ್ಮಾನಿಸಿ, ಅದರಂತೆ ಮೇಲೆ ಓದಲಾದ ಸರ್ಕಾರದ ಆದೇಶ ಸಂಖ್ಯೆ: ಇಡಿ 31 ವಿವಿಧ 2015 ಬೆಂಗಳೂರು ದಿನಾಂಕ:13.11.2015ನ್ನು ಹೊರಡಿಸಲಾಗಿತ್ತು.

ಮೇಲೆ (2) ರಲ್ಲಿ ಓದಲಾದ ಸೇರ್ಪಡೆ ಆದೇಶದಲ್ಲಿ ಮೇಲ್ಕಂಡ ವೆಚ್ಚವನ್ನು ಇಲಾಖೆಗೆ ನಿಗದಿಪಡಿಸಲಾಗುವ ಅನುದಾನದ ಮಿತಿಯಲ್ಲಿಯೇ ಭರಿಸಲು ಪರಿಶೀಲಿಸುವ ಷರತ್ತಿಗೊಳಪಟ್ಟಿದೆ ಎಂಬ ಅಂಶವನ್ನು ಸೇರ್ಪಡೆಗೊಳಿಸಲಾಗಿದೆ.

ಮೇಲೆ ಓದಲಾದ (3) ರಲ್ಲಿನ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ದಿನಾಂಕ:19.11.2016ರ ಸಭೆಯ ನಡವಳಿಯಲ್ಲಿ ಸ್ಪಷ್ಟ ಕಾರ್ಯಕಾರಿ ಮಾರ್ಗಸೂಚಿಗಳನ್ನು ಹೊರಡಿಸಲು ನಿರ್ಣಯಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಬರಪರಿಸ್ಥಿತಿಯ ಸಂದರ್ಭದಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಮಕ್ಕಳಿಗೆ ಸ್ನಾತಕೋತ್ತರ ಪದವಿ ಹಂತದವರೆಗೆ ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ / ಸರ್ಕಾರಿ / ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳ ಶಿಕ್ಷಣ ಶುಲ್ಕ ಮತ್ತು ವಸತಿ ವೆಚ್ಚವನ್ನು ಸರ್ಕಾರದಿಂದ ಭರಿಸಲು ಮಾರ್ಗಸೂಚಿಗಳನ್ನು ಹೊರಡಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ:ಇಡಿ 66 ವಿವಿಧ 2016 (ಭಾಗ-1) ಬೆಂಗಳೂರು,**
**ದಿನಾಂಕ: 24-07-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಬರಪರಿಸ್ಥಿತಿಯ ಸಂದರ್ಭದಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಮಕ್ಕಳ ಸ್ನಾತಕೋತ್ತರ ಪದವಿ ಹಂತದವರೆಗೆ ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ / ಸರ್ಕಾರಿ / ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳ ಶಿಕ್ಷಣ ಶುಲ್ಕ ಮತ್ತು ವಸತಿ ವೆಚ್ಚವನ್ನು ಸರ್ಕಾರದಿಂದ ಭರಿಸಲು ನಿರ್ಧರಿಸಿ, ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಕೆಳಕಂಡ ಮಾರ್ಗಸೂಚಿಗಳನ್ನು ನಿಗದಿಪಡಿಸಲಾಗಿದ್ದು, ಈ ಮಾರ್ಗಸೂಚಿಗಳನ್ನು ಉನ್ನತ ಶಿಕ್ಷಣ ಇಲಾಖೆಯ ಅಧೀನದಲ್ಲಿನ ಎಲ್ಲಾ ಇಲಾಖೆಗಳು ಮತ್ತು ವಿಶ್ವವಿದ್ಯಾಲಯಗಳು ಅನುಸರಿಸುವಂತೆ ಆದೇಶಿಸಲಾಗಿದೆ.

1. ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುವ ಸರ್ಕಾರಿ / ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳ ಶಿಕ್ಷಣ ಶುಲ್ಕ ಮತ್ತು ವಸತಿ ವೆಚ್ಚವನ್ನು 2017-18ನೇ ಸಾಲಿನಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಲೆಕ್ಕಶೀರ್ಷಿಕೆ 2202-03-103-2-01-051 ರಡಿ ಲಭ್ಯವಿರುವ ಅನುದಾನದಿಂದ ಭರಿಸತಕ್ಕದ್ದು.
2. ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುವ ಸರ್ಕಾರಿ / ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಪಾಲಿಟೆಕ್ನಿಕ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳ ಶಿಕ್ಷಣ ಶುಲ್ಕ ಮತ್ತು ವಸತಿ ವೆಚ್ಚವನ್ನು 2017-18ನೇ ಸಾಲಿನಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಲೆಕ್ಕಶೀರ್ಷಿಕೆ 2203-00-105-0-01-051 ರಡಿ ಲಭ್ಯವಿರುವ ಅನುದಾನದಿಂದ ಭರಿಸತಕ್ಕದ್ದು.
3. ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುವ ಸರ್ಕಾರಿ / ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳ ಶಿಕ್ಷಣ ಶುಲ್ಕ ಮತ್ತು ವಸತಿ ವೆಚ್ಚವನ್ನು 2017-18ನೇ ಸಾಲಿನಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಲೆಕ್ಕಶೀರ್ಷಿಕೆ 2203-00-112-0-02-051ರಡಿ ಲಭ್ಯವಿರುವ ಅನುದಾನದಿಂದ ಭರಿಸತಕ್ಕದ್ದು.
4. ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕ ಮತ್ತು ಸ್ನಾತಕೋತ್ತರ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳ ಶಿಕ್ಷಣ ಶುಲ್ಕ ವೆಚ್ಚವನ್ನು ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ಆಂತರಿಕ ಸಂಪನ್ಮೂಲದಿಂದ ಭರಿಸತಕ್ಕದ್ದು.
5. ಆತ್ಮಹತ್ಯೆ ಮಾಡಿಕೊಂಡ ರೈತರ ಮಕ್ಕಳ ಉನ್ನತ ಶಿಕ್ಷಣಕ್ಕೆ ಅನುಕೂಲವಾಗುವಂತೆ ಉಚಿತ ಹಾಸ್ಟೆಲ್ ಸೌಲಭ್ಯವನ್ನು ಸಮಾಜ ಕಲ್ಯಾಣ ಇಲಾಖೆ/ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ/ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳು ಒದಗಿಸತಕ್ಕದ್ದು.
6. **ಖಾಸಗಿ ಅನುದಾನಿತ / ಖಾಸಗಿ ಅನುದಾನರಹಿತ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ, ಸರ್ಕಾರಿ ಕಾಲೇಜುಗಳಲ್ಲಿ ನಿಗದಿಪಡಿಸಿರುವ ಶುಲ್ಕಕ್ಕೆ ಸಮಾನ ಶುಲ್ಕವನ್ನು ಮರುಪಾವತಿಸಲು ಕ್ರಮ ಕೈಗೊಳ್ಳತಕ್ಕದ್ದು.**
7. ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಇಲಾಖಾ ಮುಖ್ಯಸ್ಥರುಗಳು ಹಾಗೂ ವಿಶ್ವವಿದ್ಯಾಲಯಗಳ ಮುಖ್ಯಸ್ಥರುಗಳು ತಮ್ಮ ಹಂತದಲ್ಲಿ ಅಗತ್ಯ ಮಾರ್ಗಸೂಚಿಗಳನ್ನು ಹೊರಡಿಸಿ ಅದರಂತೆ ಕ್ರಮವಹಿಸತಕ್ಕದ್ದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2017 ದಿನಾಂಕ: 05-04-2017 ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಎ.ಅಹಮದ್ ಜಾನ್)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ,
(ವಿಶ್ವವಿದ್ಯಾಲಯಗಳು-2 & ಸಾಮಾನ್ಯ-2)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು560001.